ವಿಳಾಸ : UNIREG
ದೂರವಾಣಿ ಸಂಖ್ಯೆ :2419440/2419361
ಫ್ಯಾಕ್ಸ್ ಸಂಖ್ಯೆ : 0821- 2419363/2419301

ಇಮೇಲ್ : registrar@uni-mysore.ac.in
ವೆಬ್ ಸೈಟ್: www.uni-mysore.ac.in

# ಮೈಸೂರು ವಿಶ್ವವಿದ್ಯಾನಿಲಯ

ಸ್ಥಾಪನೆ1916

ವಿಶ್ವವಿದ್ಯಾನಿಲಯ ಕಾರ್ಯಸೌಧ,
ಕ್ರಾಫರ್ಡ್‌ಭವನ, ಅಂಚೆ ಪೆಟ್ಟಿಗೆ ಸಂಖ್ಯೆ 406,
ಮೈಸೂರು-570 005.

ವಿಷಯ: 2020-21ನೇ ಶೈಕ್ಷಣಿಕ ಸಾಲಿಗೆ ಅತಿಥಿ ಉಪನ್ಯಾಸಕರನ್ನು ಆಹ್ವಾನಿಸುವ ಬಗ್ಗೆ.

ಉಲ್ಲೇಖ: 1. ವಿಶ್ವವಿದ್ಯಾನಿಲಯದ ಆದೇಶ ಸಂಖ್ಯೆ: ಇಟಿ9/183/2017-18 ದಿನಾಂಕ 31.07.2019(4).
2. ವಿಶ್ವವಿದ್ಯಾನಿಲಯದ ಆದೇಶ ಸಂಖ್ಯೆ: ಇಟಿ11/45/2020-21, ದಿನಾಂಕ 02.09.2020.

*****

## ಪರಿಷ್ಕೃತ ಆದೇಶ ಸಂಖ್ಯೆ: ಇಟಿ9/183/2017-18 ದಿನಾಂಕ 30ನೇ ಏಪ್ರಿಲ್ 2021

ಮಾನ್ಯ ಕುಲಪತಿಯವರ ಅನುಮೋದನೆಯ ಮೇರೆಗೆ, ವಾಣಿಜ್ಯಶಾಸ್ತ್ರ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು ಇಲ್ಲಿ ಕಾರ್ಯನಿರ್ವಹಿಸುತ್ತಿರುವ ಕೆಳಕಂಡ ಅತಿಥಿ ಉಪನ್ಯಾಸಕರಿಗೆ ಉಲ್ಲೇಖ (1)ರ ಆದೇಶದಲ್ಲಿ ಈಗಾಗಲೇ ಹಂಚಿಕೆ ಮಾಡಲಾಗಿದ್ದ ಬೋಧನಾ ಕಾರ್ಯಭಾರವನ್ನು ಕೆಳಗಿನಂತೆ ಪರಿಷ್ಕರಿಸಲಾಗಿದೆ.

| ಅತಿಥಿ ಉಪನ್ಯಾಸಕರ ಹೆಸರು | ವಿಷಯ | ಉಲ್ಲೇಖ (1)ರ ಆದೇಶದಲ್ಲಿ ವಹಿಸಿದ್ದ ಬೋಧನಾ (ಥಿಯರಿ / ಪ್ರಾಕ್ಟಿಕಲ್) ಕಾರ್ಯಭಾರ (ಗಂಟೆಗಳಲ್ಲಿ) * | ಉಲ್ಲೇಖ (1)ರ ಆದೇಶದಲ್ಲಿ ನಿಗದಿಪಡಿಸಿದ್ದ ಮಾಹೆಯಾನ ಸಂಭಾವನೆ ರೂ.ಗಳಲ್ಲಿ | ಪ್ರಸ್ತುತ ನಿಗದಿಪಡಿಸಿರುವ ಪರಿಷ್ಕೃತ ಬೋಧನಾ (ಥಿಯರಿ / ಪ್ರಾಕ್ಟಿಕಲ್) ಕಾರ್ಯಭಾರ (ಗಂಟೆಗಳಲ್ಲಿ) * | ಪರಿಷ್ಕೃತ ಸಂಭಾವನೆ ರೂ.ಗಳಲ್ಲಿ |
|---|---|---|---|---|---|
| ಶ್ರೀ ಭರತ್ ವಿ. | ವಾಣಿಜ್ಯಶಾಸ್ತ್ರ | 08 | 15,000/- | 12 | 28,000/- |

* ಬೋಧನಾ ವಿಷಯ, ಥಿಯರಿ/ಪ್ರಾಕ್ಟಿಕಲ್ ಕಾರ್ಯದ ಬಗ್ಗೆ ಸಂಬಂಧಪಟ್ಟ ವಿಭಾಗದ ಅಧ್ಯಕ್ಷರು ಹಂಚಿಕೆ ಮಾಡುವರು. ಎರಡು ಪ್ರಾಯೋಗಿಕ ಬೋಧನಾ ಕಾರ್ಯವು ಒಂದು ಥಿಯರಿ ಬೋಧನಾ ಕಾರ್ಯಕ್ಕೆ ಸಮಾನವಾಗಿರುತ್ತದೆ.

ಈ ವೆಚ್ಚವನ್ನು ಆಯವ್ಯಯ ಅಂದಾಜುಗಳ "ವೇತನ ಮತ್ತು ಭತ್ಯೆಗಳು" ಖಾತೆಯ "ತಾತ್ಕಾಲಿಕ ಅಧ್ಯಾಪಕರ ವೇತನ" (ಕೋಡ್ 228) ಶೀರ್ಷಿಕೆಯಿಂದ ಭರಿಸಬಹುದಾಗಿದೆ.

ಷರತ್ತುಗಳು:

ಅ. ಪ್ರತಿ ವಾರದಲ್ಲಿ 12 ಗಂಟೆಗಳ ಬೋಧನಾ ಕಾರ್ಯ ನಿರ್ವಹಿಸಲು ಆಹ್ವಾನಿತವಾಗಿರುವ ಅತಿಥಿ ಉಪನ್ಯಾಸಕರುಗಳು ಪ್ರತಿದಿನ ಸ್ನಾತಕೋತ್ತರ ಕೇಂದ್ರದ ಕೆಲಸದ ಪೂರ್ಣಾವಧಿಯಲ್ಲಿ ಕಡ್ಡಾಯವಾಗಿ ಉಪಸ್ಥಿತರಿದ್ದು, ವಿದ್ಯಾರ್ಥಿಗಳ ಮಾರ್ಗದರ್ಶನಕ್ಕೆ ಲಭ್ಯವಿರಬೇಕು ಹಾಗೂ ಸರ್ಕಾರದ ಸುತ್ತೋಲೆ ಸಂಖ್ಯೆ: ಕಾಶಿಇ/44/ಅಉನೇ/2012-13ನೇ ಪಾವಿ-1, ದಿನಾಂಕ 02-07-2013ರ ಪ್ರಕಾರ ಕಾರ್ಯನಿರ್ವಹಿಸಬೇಕಾಗಿರುತ್ತದೆ.

ಆ. ಅತಿಥಿ ಉಪನ್ಯಾಸಕರು ಪ್ರತಿ ಮಾಹೆಯಲ್ಲಿ ಒಂದು ದಿವಸ ಸಾಂದರ್ಭಿಕ ರಜೆಯನ್ನು ಪಡೆಯಲು ಅರ್ಹರಿರುತ್ತಾರೆ ಮತ್ತು ಈ ರಜೆ ಅವಧಿಯ ಬೋಧನಾ ಕಾರ್ಯಭಾರವನ್ನು ಮುಂದಿನ ಮಾಹೆಯೊಳಗೆ ಸರಿದೂಗಿಸುವುದು.

ಇ. ಹಂಚಿಕೆಯಾಗಿರುವ ಬೋಧನಾ ತರಗತಿಗಳನ್ನು ತೆಗೆದುಕೊಳ್ಳಲು ವಿಫಲರಾದಲ್ಲಿ, ಗೈರುಹಾಜರಾದ ದಿನದ ಸಂಭಾವನೆಯನ್ನು ಕಡಿತಗೊಳಿಸಲಾಗುವುದು.

ಈ. ಮೈಸೂರು ವಿಶ್ವವಿದ್ಯಾನಿಲಯದಲ್ಲಿ 2020-21ನೇ ಶೈಕ್ಷಣಿಕ ವರ್ಷದಲ್ಲಿ 12 ಗಂಟೆಗಳ ಕಾರ್ಯಭಾರ ನಿರ್ವಹಿಸುವ ಅತಿಥಿ ಉಪನ್ಯಾಸಕರುಗಳು ಬೇರೆ ಸರ್ಕಾರಿ ಕಾಲೇಜು ಅಥವಾ ಖಾಸಗಿ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸಬಾರದು.

349 1/7/21
DOS IN COMMERCE
MANASAGANGOTRI
MYSORE-570 006

{ಮು.ತಿ.ನೋ}

ಆಹ್ವಾನಿತ ಅತಿಥಿ ಉಪನ್ಯಾಸಕರು ಮಾರ್ಪಾಡಿತ ಕಾರ್ಯಭಾರಕ್ಕೆ ವರದಿ ಮಾಡಿಕೊಳ್ಳುವಾಗ ಈ ಕೆಳಕಂಡಂತೆ ಮುಚ್ಚಳಿಕೆಯನ್ನು ನೀಡತಕ್ಕದ್ದು.

**ಮುಚ್ಚಳಿಕೆ**

1. ಈ ಮೂಲಕ ಪ್ರಮಾಣೀಕರಿಸುವುದೇನೆಂದರೆ, ವಿಶ್ವವಿದ್ಯಾನಿಲಯವು 2020-21ನೇ ಶೈಕ್ಷಣಿಕ ವರ್ಷಕ್ಕೆ ಅಥವಾ ಮುಂದಿನ ಆದೇಶದವರೆಗೆ, ಯಾವುದು ಮೊದಲು ಘಟಿಸುವುದೋ ಅಲ್ಲಿಯವರೆಗೆ ಹೆಚ್ಚುವರಿ ಬೋಧನಾಕಾರ್ಯವನ್ನು ನಿರ್ವಹಿಸಲು ನನ್ನನ್ನು ಆಹ್ವಾನಿಸಿರುವುದು ತಾತ್ಕಾಲಿಕವಾಗಿರುತ್ತದೆ ಎಂದು ತಿಳಿದಿರುತ್ತೇನೆ. ಜೊತೆಗೆ ಕಾರಣಾಂತರಗಳಿಂದ ಹೆಚ್ಚುವರಿ ಬೋಧನಾಕಾರ್ಯದಲ್ಲಿ ಕೊರತೆಯುಂಟಾದಲ್ಲಿ ವಿಶ್ವವಿದ್ಯಾನಿಲಯವು ಯಾವುದೇ ಮುನ್ಸೂಚನೆ ಇಲ್ಲದಂತೆ ಹಾಗೂ ಯಾವುದೇ ಕಾರಣ ನೀಡದೆ ನನಗೆ ನೀಡಿರುವ ಅತಿಥಿ ಉಪನ್ಯಾಸಕರ ಆಹ್ವಾನವನ್ನು ಹಿಂಪಡೆಯಬಹುದಾಗಿದೆ.
2. ನಾನು ಕರ್ನಾಟಕ ಸರ್ಕಾರದ ಸುತ್ತೋಲೆ ಸಂಖ್ಯೆ: ಕಾಶಿಇ/44/ಅಉನೇ/2012-13ನೇ ಪಾವಿ-1, ದಿನಾಂಕ 02-07-2013ರಲ್ಲಿ ಸೂಚಿಸಿರುವಂತೆ, ಮೈಸೂರು ವಿಶ್ವವಿದ್ಯಾನಿಲಯದಲ್ಲಿ ಅತಿಥಿ ಉಪನ್ಯಾಸಕನಾಗಿ ಕೆಲಸ ನಿರ್ವಹಿಸುತ್ತಿರುವಾಗ ಯಾವುದೇ ಸರ್ಕಾರಿ/ವಿಶ್ವವಿದ್ಯಾನಿಲಯದ ಸಂಯೋಜಿತ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕನಾಗಿ ಕರ್ತವ್ಯ ನಿರ್ವಹಿಸುವುದಿಲ್ಲ ಎಂದು ಈ ಮೂಲಕ ಪ್ರಮಾಣೀಕರಿಸುತ್ತೇನೆ ಹಾಗೂ ಹಾಗೇನಾದರೂ ಕೆಲಸ ನಿರ್ವಹಿಸುವುದುಕಂಡು ಬಂದಲ್ಲಿ, ಈ ನೇಮಕಾತಿಯನ್ನು ಯಾವುದೇ ಸೂಚನೆ ನೀಡದೇ ರದ್ದುಪಡಿಸಲಾಗುವುದೆಂದು ತಿಳಿದಿರುತ್ತೇನೆ.

ಆದೇಶದ ಮೇರೆಗೆ

4/5/2021

ಕುಲಸಚಿವ

**ಇವರಿಗೆ:**

1. ಸಂಬಂಧಪಟ್ಟ ಅತಿಥಿ ಉಪನ್ಯಾಸಕರಿಗೆ – ವಿಭಾಗದ ಅಧ್ಯಕ್ಷರ ಮುಖಾಂತರ.
2. ಅಧ್ಯಕ್ಷರು, ವಾಣಿಜ್ಯಶಾಸ್ತ್ರ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು – ಅತಿಥಿ ಉಪನ್ಯಾಸಕರಿಂದ ಮೇಲೆ ತಿಳಿಸಿರುವ ಮುಚ್ಚಳಿಕೆಯನ್ನು ಕಡ್ಡಾಯವಾಗಿ ಬರೆಸಿಕೊಳ್ಳುವುದು ಮತ್ತು ವಿದ್ಯಾರ್ಹತೆಗೆ ಸಂಬಂಧಪಟ್ಟ ದಾಖಲೆಗಳನ್ನು ಪರಿಶೀಲಿಸಿ ದೃಢಪಡಿಸಿಕೊಂಡು ನಂತರ ಕೆಲಸಕ್ಕೆ ವರದಿ ಮಾಡಿಸಿಕೊಳ್ಳುವುದು.
3. ಕುಲಸಚಿವರು (ಪರೀಕ್ಷಾಂಗ), ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
4. ಹಣಕಾಸು ಅಧಿಕಾರಿಯವರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
5. ಆಡಳಿತಾಧಿಕಾರಿಗಳು, ಆಡಳಿತಾಧಿಕಾರಿಗಳ ಕಛೇರಿ, ಮಾನಸಗಂಗೋತ್ರಿ, ಮೈಸೂರು.
6. ಉಪಕುಲಸಚಿವರು (ಸಾಮಾನ್ಯ)/ಸಹಾಯಕ ಕುಲಸಚಿವ/ಅಧೀಕ್ಷಕರು (ಸಿಬ್ಬಂದಿ), ಆಡಳಿತ ಶಾಖೆ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
7. ಕುಲಪತಿ/ಕುಲಸಚಿವ/ಹಣಕಾಸು ಅಧಿಕಾರಿ/ಕುಲಸಚಿವ(ಪ) ಅವರುಗಳ ಆಪ್ತ ಸಹಾಯಕರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
8. ಕಛೇರಿ ಪ್ರತಿ.